ಶ್ರೀ ಎಚ್.ಎನ್.ನಂಜೇಗೌಡ:- ಮಾನ್ಯ ಅಧ್ಯಕ್ಷರೆ, ನಾನು ಮತ್ತು ಕೆಲವರು ತಾವು ಅನುಮತಿ ಕೊಟ್ಟರೆ .....

ಅಧ್ಯಕ್ಷರು:- ಒಂದು ಸಣ್ಣ ಮನವಿ ಇದೆ. ಮಾನ್ಯ ಕಂದಾಯಮಂತ್ರಿಗಳ ಕಡೆಯವರು ಒಬ್ಬರು ತೀರಿಹೋಗಿದ್ದಾರೆ. ಆದ್ದರಿಂದ ಅವರು ಅಲ್ಲಿಗೆ ಹೋಗಬೇಕಾಗಿದೆ. ಅವರ ಇಲಾಖೆಗೆ ಸಂಬಂಧಪಟ್ಟಂತೆ ಎರಡು ವಿಧೇಯಕಗಳಿವೆ. ಅದನ್ನು ಇಂಟ್ರಡ್ಯೂಸ್ ಮಾಡುವುದಕ್ಕೆ ಅವಕಾಶ ಕೊಡಿ. ನಂತರ ತಾವು ಮುಂದುವರೆಸಬಹುದು.

ಶಾಸನ ರಚನಾ ಕಾರ್ಯಕಲಾಪಗಳು

(ಎ) ವಿಧೇಯಕಗಳ ಮಂಡನೆ

1. ಮೈಸೂರು (ಧಾರ್ಮಿಕ ಮತ್ತು ಧರ್ಮಾದಾಯ) ಇನಾಂ ರದ್ದಿಯಾತಿ (ಕರ್ನಾಟಕ ತಿದ್ದುಪಡಿ) ವಿಧೇಯಕ, 1995.

ಶ್ರೀ ಆರ್.ಎಲ್.ಜಾಲಪ್ಪ (ಕಂದಾಯ ಮಂತ್ರಿಗಳು):- ಮಾನ್ಯ ಅಧ್ಯಕ್ಷರೆ, 1995ನೇ ಇಸವಿಯ ಮೈಸೂರು (ಧಾರ್ಮಿಕ ಮತ್ತು ಧರ್ಮಾದಾಯ) ಇನಾಂ ರದ್ದಿಯಾತಿ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು:- ಪ್ರಸ್ತಾಪ ಏನೆಂದರೆ:-

''1995ರ ಮೈಸೂರು (ಧಾರ್ಮಿಕ ಮತ್ತು ಧರ್ಮಾದಾಯ) ಇನಾಂ ರದ್ದಿಯಾತಿ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು''.

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಆರ್.ಎಲ್.ಜಾಲಪ್ಪ:- ಮಾನ್ಯ ಅಧ್ಯಕ್ಷರೆ, 1995ರ ಮೈಸೂರು (ಧಾರ್ಮಿಕ ಮತ್ತು ಧರ್ಮಾದಾಯ) ಇನಾಂ ರದ್ದಿಯಾತಿ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:- ವಿಧೇಯಕವನ್ನು ಮಂಡಿಸಲಾಗಿದೆ.

2. ಕರ್ನಾಟಕ ವಿಶೇಷ ನ್ಯಾಯಾಧೀಕರಣ (ತಿದ್ದುಪಡಿ) ವಿಧೇಯಕ, 1995

ಶ್ರೀ ಆರ್.ಎಲ್.ಜಾಲಪ್ಪ:- ಮಾನ್ಯ ಅಧ್ಯಕ್ಷರೆ, 1995ನೇ ಇಸವಿಯ ಕರ್ನಾಟಕ ವಿಶೇಷ ನ್ಯಾಯಾಧೀಕರಣ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು:- ಪ್ರಸ್ತಾಪ ಏನೆಂದರೆ:

''ಕರ್ನಾಟಕ ವಿಶೇಷ ನ್ಯಾಯಾಧಿಕರಣ (ತಿದ್ದುಪಡಿ) ವಿಧೇಯಕ 1995ನ್ನು ಮಂಡಿಸಲು ಅನುಮತಿ ನೀಡುವುದು''

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಆರ್.ಎಲ್.ಜಾಲಪ್ಪ:- ಮಾನ್ಯ ಅಧ್ಯಕ್ಷರೆ, 1995ನೇ ಇಸವಿಯ ಕರ್ನಾಟಕ ವಿಶೇಷ ನ್ಯಾಯಾಧಿಕರಣ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:- ವಿಧೇಯಕವನ್ನು ಮಂಡಿಸಲಾಗಿದೆ.